ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19** **ದಿನಾಂಕ: 02–01–2019**

**ಸಂಖ್ಯೆ: 8/1**

## ಪತ್ರಿಕಾ ಪ್ರಕಟಣೆ

# ಅಪರಾಧ ಪ್ರಕರಣಗಳಿಗೆ ಕಡಿವಾಣ ಹಾಕುವಂತೆ ಅಧಿಕಾರಿಗಳಿಗೆ ಸೂಚನೆ

– ಗೃಹ ಸಚಿವ ಎಂ.ಬಿ. ಪಾಟೀಲ್

ಬೆಂಗಳೂರು, ಜನವರಿ 2, (ಕರ್ನಾಟಕ ವಾರ್ತೆ)

ಅಪರಾಧ ಪ್ರಕರಣಗಳನ್ನು ತಹಬಧಿಗೆ ತರುವುದು, ಮಾದಕ ವಸ್ತುಗಳ ನಿಯಂತ್ರಣ ಹಾಗೂ ನಗರದಲ್ಲಿನ ಸಂಚಾರ ದಟ್ಟಣೆಯನ್ನು ತಡೆಗಟ್ಟಲು ತೆಗೆದುಕೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ಇಂದು ನಡೆದ ಸಭೆಯಲ್ಲಿ ಚರ್ಚಿಸಲಾಯಿತು ಎಂದು ಗೃಹ ಸಚಿವ ಎಂ. ಬಿ. ಪಾಟೀಲ್ ಅವರು ತಿಳಿಸಿದರು.

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಇಂದು ಉನ್ನತ ಮಟ್ಟದ ಪೊಲೀಸ್ ಅಧಿಕಾರಿಗಳೊಂದಿಗೆ ಇಲಾಖೆ ಸಮಸ್ಯೆಗಳು ಹಾಗೂ ಕಾನೂನು ಸುವ್ಯವಸ್ಥೆ ಬಗ್ಗೆ ಮಾಹಿತಿ ಪಡೆದ ನಂತರ ಸುದ್ಧಿಗಾರರೊಂದಿಗೆ ಮಾತನಾಡಿದ ಗೃಹ ಸಚಿವರು ಅಪರಾಧ ಪ್ರಕರಣಗಳನ್ನು ತಡೆಗಟ್ಟುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ, ಇಲಾಖೆಗೆ ಸಂಬಂಧಿಸಿದ ಕೆಲವು ಯೋಜನೆಗಳು ಆರ್ಥಿಕ ಇಲಾಖೆಯಲ್ಲಿ ಬಾಕಿ ಇವೆ ಹಾಗೂ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಪೊಲೀಸ್ ಸಿಬ್ಬಂದಿಗಳಿಗೆ ವಸತಿ ಸೌಲಭ್ಯ ಕಲ್ಪಿಸುವುದು ಸೇರಿದಂತೆ ಅವರ ಜೀವನ ಮಟ್ಟ ಸುಧಾರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಗೌರಿ ಲಂಕೇಶ್ ಹಾಗೂ ಎಂ.ಎಂ. ಕಲ್ಬುರ್ಗಿ ಹತ್ಯೆ ಪ್ರಕರಣಗಳಿಗೆ ಸಂಬಂದಿಸಿದಂತೆ ತನಿಖೆಗಳು ನಡೆಯುತ್ತಿದ್ದು, ಎರಡು ಪ್ರಕರಣಗಳು ಬೇಗ ತಾರ್ಕಿಕ ಅಂತ್ಯಕ್ಕೆ ಬರುವ ವಿಶ್ವಾಸ ಇದೆ, ತನಿಖಾಧಿಕಾರಿಗಳು ಉತ್ತಮವಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದರು.

ಅಕ್ರಮ ವಲಸಿಗರೆಂದು ರಾಜ್ಯದಲ್ಲಿ 113 ಜನರನ್ನು ಈಗಾಗಲೇ ಗುರುತಿಸಲಾಗಿದೆ. ಅಕ್ರಮ ವಲಸಿಗರ ಬಗ್ಗೆ ನಿಗಾವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಅಪರಾಧಿಗಳನ್ನು ಯಾವುದೇ ಜಾತಿ ಧರ್ಮದವರೆಂದು ಗುರುತಿಸುವುದು ಸರಿಯಲ್ಲ ಎಂದರು.

ಪೊಲೀಸ್ ಸಿಬ್ಬಂದಿಗಳ ಜೀವನ ಮಟ್ಟ ಸುಧಾರಿಸುವ ಸಂಬಂಧ ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗುವುದು, ಔರಾದ್‌ಕರ್ ವರದಿ ಬಗ್ಗೆ ಹೆಚ್ಚಿನ ಮಾಹಿತಿ ಇಲ್ಲ. ವರದಿ ತರಿಸಿ ನೋಡುತ್ತೇನೆ ನಂತರ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಇಂದು ಇಲಾಖೆಯ ಕೆಲವು ವಿಭಾಗಗಳ ಬಗ್ಗೆ ಮಾತ್ರ ಮಾಹಿತಿ ಪಡೆಯಲಾಗಿದ್ದು, ಮುಂದಿನ ವಾರ ಉಳಿದ ವಿಭಾಗಳ ಬಗ್ಗೆ ಮಾಹಿತಿ ಪಡೆದು ಇಲಾಖೆಯ ಒಟ್ಟಾರೆ ಪ್ರಗತಿಯ ಬಗ್ಗೆ ಮಾಹಿತಿ ಒದಗಿಸಲಾಗುವುದು, ಇಲಾಖೆಯಲ್ಲಿ ಉತ್ತಮ ಅಧಿಕಾರಿಗಳಿದ್ದಾರೆ, ಅವರನ್ನು ಗುರುತಿಸಿ ಪ್ರೋತ್ಸಾಹಿಸಬೇಕಾಗಿದೆ ಎಂದು ಇದೆ ಸಂದರ್ಭದಲ್ಲಿ ತಿಳಿಸಿದರು.

**ಸಂಖ್ಯೆ: 9/1**

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಸ ರೂಪ ತಾಳಬೇಕು..

**–ಪಂಕಜ್‌ಕುಮಾರ್ ಪಾಂಡೆ**

ಬೆಂಗಳೂರು, ಜನವರಿ 2, (ಕರ್ನಾಟಕ ವಾರ್ತೆ)

ಪ್ರಸ್ತುತ ದಿನಮಾನಗಳಲ್ಲಿ ತಾಂತ್ರಿಕತೆಯ ಲೋಕದಲ್ಲಿನ ಬೆಳವಣಿಗೆಗಳ ಹಿನ್ನಲೆಯಲ್ಲಿ ಮಾಧ್ಯಮಗಳು ಸಾಕಷ್ಟು ಬದಲಾಗಿದ್ದು, ಬದಲಾವಣೆಗೆ ಅನುಗುಣವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೂ ಕೂಡ ಹೊಸ ರೂಪ ತಾಳಬೇಕಾದ ಅವಶ್ಯಕತೆ ಇದೆ ಎಂದು ಇಲಾಖೆಯ ಸರ್ಕಾರದ ಕಾರ್ಯದರ್ಶಿ ಪಂಕಜ್‌ಕುಮಾರ್ ಪಾಂಡೆ ಅವರು ಹೇಳಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೇಂದ್ರ ಕಚೇರಿಯಲ್ಲಿ ಇಂದು ಹಮ್ಮಿಕೊಂಡಿದ್ದ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು ಇಲಾಖೆ ಬಜೆಟ್ ವಿಚಾರದಲ್ಲಿ ಮತ್ತು ಅಧಿಕಾರಿ/ಸಿಬ್ಬಂದಿಗಳ ಗಾತ್ರದಲ್ಲಿ ಚಿಕ್ಕ ಇಲಾಖೆಯಾಗಿದ್ದರು ಸಹ ಸರ್ಕಾರದಲ್ಲಿ ಅತ್ಯಂತ ಪ್ರಮುಖ ಇಲಾಖೆಯಾಗಿದೆ. ಸರ್ಕಾರದ ಯೋಜನೆಗಳನ್ನು ಮತ್ತು ಅಭಿವೃದ್ಧಿ ಕಾರ್ಯಕ್ರಮಗಳನ್ನು ಸಾರ್ವಜನಿಕರಿಗೆ ತಲುಪಿಸುವ ಮಹತ್ತರ ಜವಬ್ಧಾರಿ ಹೊಂದಿದೆ. ನಮ್ಮದು ಸೇವಾ ಇಲಾಖೆಯಾಗಿದ್ದು, ಸರ್ಕಾರದ ಅತ್ಯಂತ ಪ್ರಮುಖ ಇಲಾಖೆಗಳಲ್ಲಿ ಒಂದಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸಭೆಯಲ್ಲಿ ಭಾಗವಹಿಸಿದ್ದ ಜಿಲ್ಲಾ ವಾರ್ತಾಧಿಕಾರಿಗಳ ಸಮಸ್ಯೆಗಳನ್ನು ಆಲಿಸಿದ ಅವರು ತುರ್ತಾಗಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಇಂತಹ ಸಭೆಗಳ ಅವಶ್ಯಕತೆ ಇರುತ್ತದೆ. ಸರ್ಕಾರದ ಮಟ್ಟದಲ್ಲಿ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿದಾಗ ಇಲಾಖೆಯ ಪರ ಮಾತನಾಡಲು ಸಹಾಯಕವಾಗುತ್ತದೆ ಎಂದರು.

ಇದೇ ಸಮಯದಲ್ಲಿ ಇಲಾಖೆಯ ಅಂಗ ಸಂಸ್ಥೆಗಳಾದ ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ನಾಗತಿಹಳ್ಳಿ ಚಂದ್ರಶೇಖರ್, ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷ ಎಂ. ಸಿದ್ದರಾಜು, ಮದ್ಯಪಾನ ಸಂಯಮ ಮಂಡಳಿ ಹಿರಿಯ ಅಧಿಕಾರಿಗಳು ತಮ್ಮ ಸಂಸ್ಥೆಗಳ ಕಾರ್ಯವೈಖರಿ ಹಾಗೂ ಸಾಧನೆಗಳ ಕುರಿತು ಕಾರ್ಯದರ್ಶಿಗಳೊಂದಿಗೆ ಚರ್ಚಿಸಿದರು.

ಸಭೆಯ ಆರಂಭದಲ್ಲಿ ಮಾತನಾಡಿದ ಇಲಾಖೆಯ ಜಂಟಿ ನಿರ್ದೇಶಕರಾದ ಹೆಚ್. ಬಿ. ದಿನೇಶ್ ಅವರು ಪ್ರಸ್ತುತ ಇಲಾಖೆಗೆ ಅವಶ್ಯವಿರುವ ಅಂಶಗಳನ್ನು ಪ್ರಸ್ತಾಪಿಸಿ ಕಾರ್ಯದರ್ಶಿಗಳ ಗಮನ ಸೆಳೆದರು. ಜಂಟಿ ನಿರ್ದೇಶಕರಾದ ಎ.ಆರ್. ಪ್ರಕಾಶ್ ಅವರು ವಂದಿಸಿದರು.

**ಸಂಖ್ಯೆ: 10/1**

## <u>ಸಚಿವರ ಪ್ರವಾಸ</u>

<u>ಬೆಂಗಳೂರು, ಜನವರಿ 2, (ಕರ್ನಾಟಕ ವಾರ್ತೆ)</u>

**ಕಂದಾಯ ಸಚಿವ ಆರ್. ವಿ. ದೇಶಪಾಂಡೆ ಅವರುಜನವರಿ 3 ರಿಂದ 5 ರವರೆಗೆ ಧಾರವಾಡ, ಉತ್ತರ ಕನ್ನಡ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿನ ಪ್ರವಾಸಮಾಡಿ ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿರುವ ಅವರು ಡಿಸೆಂಬರ್ 5 ರಂದೇ ನಗರಕ್ಕೆ ಹಿಂದಿರುಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.**

**ಸಂಖ್ಯೆ: 11/1**

## ರಾಜೀವ್ ಗಾಂಧಿ ಭೀಕರ ಹತ್ಯೆ

### ಮಾದರಿ ತನಿಖೆಯ ಸೂಕ್ಷ್ಮ ಮಜಲುಗಳು–ಪುಸ್ತಕ ಬಿಡುಗಡೆ

<u>ಬೆಂಗಳೂರು, ಜನವರಿ 2, (ಕರ್ನಾಟಕ ವಾರ್ತೆ)</u>

ಸೆಂಟ್ರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್‌ನ ಮಾಜಿ ನಿರ್ದೇಶಕ ಡಿ. ಆರ್. ಕಾರ್ತಿಕೇಯನ್ ಅವರ "ರಾಜೀವ್ ಗಾಂಧಿ ಭೀಕರ ಹತ್ಯೆ–ಮಾದರಿ ತನಿಖೆಯ ಸೂಕ್ಷ್ಮ ಮಜಲುಗಳು" ಪರಿಷ್ಕೃತ ಮೂರನೇ ಆವೃತ್ತಿಯ ಪುಸ್ತಕವನ್ನು

ಮುಖ್ಯಮಂತ್ರಿ ಹೆಚ್ .ಡಿ. ಕುಮಾರಸ್ವಾಮಿ ಅವರು ಜನವರಿ 10 ರಂದು ಸಂಜೆ 4-00 ಗಂಟೆಗೆ ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ಬಿಡುಗಡೆ ಮಾಡಲಿದ್ದಾರೆ.

ಗೃಹ ಸಚಿವ ಎಂ. ಬಿ. ಪಾಟೀಲ್ ಅವರು ಈ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ

**ಸಂಖ್ಯೆ: 12/1**

**ಬೆಂಗಳೂರು ಜಲಮಂಡಲಿ: ಜನವರಿ 03 ರಂದು ಸಕಾನಿಅ(ಉತ್ತರ-1) ಉಪವಿಭಾಗದಲ್ಲಿ ನೀರಿನ ಅದಾಲತ್**

ಬೆಂಗಳೂರು ಜಲಮಂಡಲಿಯ ದಿನಾಂಕ:03.01.2018 ರಂದು ಸಕಾನಿಅ(ಉತ್ತರ-1) ಉಪವಿಭಾಗದಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೀರಿನ ಅದಾಲತ್‌ಅನ್ನು ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುತ್ತದೆ.

ದಿನಾಂಕ: 03.01.2018 ಸಕಾನಿಅ(ಉತ್ತರ-1) ಉಪವಿಭಾಗ ವ್ಯಾಪ್ತಿಗೆ ಬರುವ ಎಂಇಐ ಲೇಔಟ್, ಸೋಲದೇವನ ಹಳ್ಳಿ, ಬಾಹುಬಲಿನಗರ ಸೇವಾಠಾಣೆಗಳಿಗೆ ಸಂಬಂಧಿಸಿದ ವಿವಾದಗಳನ್ನು ನಂ.1, ಎಂಇಐ ಲೇಔಟ್, 7ನೇ ಮುಖ್ಯ ರಸ್ತೆ, ಬೆಂಗಳೂರು-73. ಇಲ್ಲಿನ ಸಕಾನಿಅ(ಉತ್ತರ-1) ಉಪವಿಭಾಗ ಕಚೇರಿಯಲ್ಲಿ ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯನಿರ್ವಾಹಕ ಅಭಿಯಂತರರು (ವಾಯುವ್ಯ-2): 23311337. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಉತ್ತರ-1) ಉಪವಿಭಾಗ: 28371048.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರುನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ:22238888, ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ.

ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯ ಬಳಸಿಕೊಳ್ಳ ಬಹುದಾಗಿದೆ.

**ಸಂಖ್ಯೆ: 13/1**

BWSSB: Water Adalath in AEE(North-1) sub division on January 3rd

BWSSB water Adalath is held on 03.01.2018 in AEE(North-1) sub division from 9:30.am to 11.00 am to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues.

The disputes of consumers of MEI Layout, Soladevanahalli, Bhahubalinagar, service station coming under AEE(North-1) sub division, will be discussed in detail & problems will be settled in the office of the Assistant Executive Engineer (North-1) sub division, No.1, MEI layout,7th Main, Bangalore-73.

Details regarding the adalath can be obtained by the office of EE(North West-2) :23311337, or office of AEE (North-1) 28371048.

For any problems regarding the water supply and all, publics can contact 24x7 call centre: 22238888 helpline number:1916 & whats app no: 8762228888.

Public can utilize this adalath facilities to solve the problems regarding water supply